ಅನುಬಂಧ VI

ಕರ್ನಾಟಕ ವಿಧಾನಸಭೆ

ಹದಿನೈದನೇ ವಿಧಾನಸಭೆ

ಐದನೇ ಅಧಿವೇಶನ

ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಷನ್ ಶುಲ್ಕ ನಿಷೇಧ) (ತಿದ್ದುಪಡಿ) ವಿಧೇಯಕ,

2002

[2002ರ ವಿಧಾನ ಸಭೆಯ ವಿಧೇಯಕ ಸಂಖ್ಯೆ 18]

ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಷನ್ ಶುಲ್ಕ ನಿಷೇಧ) ಅಧಿನಿಯಮ, 1984ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಷನ್ ಶುಲ್ಕ ನಿಷೇಧ) ಅಧಿನಿಯಮ, 1984ನ್ನು (1984ರ ಕರ್ನಾಟಕ ಅಧಿನಿಯಮ, 37) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ಮೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ,

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.- (1) ಈ ಅಧಿನಿಯಮವನ್ನು ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಷನ್ ಶುಲ್ಕ ನಿಷೇಧ) (ತಿದ್ದುಪಡಿ) ಅಧಿನಿಯಮ, 2002 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

2. **2ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಷನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ ಸಂಖ್ಯೆ 37) 2ನೇ ಪ್ರಕರಣದ (ಸ) ಖಂಡದಲ್ಲಿ "ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಯಲಗಳ ಅಧಿನಿಯಮ, 1976ರ (1976ರ ಕರ್ನಾಟಕ ಅಧಿನಿಯಮ 28) ಅಡಿಯಲ್ಲಿ ಸ್ಥಾಪಿತವಾದ ಒಂದು ವಿಶ್ವವಿದ್ಯಾನಿಲಯದಿಂದ" ಎಂಬ ಪದಗಳು, ಅಂಕಿಗಳು ಮತ್ತು ಆವರಣಗಳಿಗೆ "ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ಸ್ಥಾಪಿತವಾದ ಒಂದು ವಿಶ್ವವಿದ್ಯಾನಿಲಯದಿಂದ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು ಮತ್ತು ಯಾವಾಗಲೂ ಪ್ರತಿಯೋಜಿಸಲಾಗಿದೆಯೆಂದು ಭಾವಿಸತಕ್ಕದ್ದು.

ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಸಾರ್ವಜನಿಕ ಹಿತಾಸಕ್ತಿಯಲ್ಲಿ ಮತ್ತು ಅದಕ್ಕೆ ಆನುಷಂಗಿಕವಾಗಿ ಶೈಕ್ಷಣಿಕ ಸಂಸ್ಥೆಗಳಲ್ಲಿ ಪ್ರವೇಶಕ್ಕಾಗಿ ಕ್ಯಾಪಿಟೇಷನ್ ಶುಲ್ಕ ವಸೂಲಿಯ ಕೆಟ್ಟಪದ್ಧತಿಯನ್ನು ಪರಿಣಾಮಕಾರಿಯಾಗಿ ತಡೆಗಟ್ಟುವುದಕ್ಕಾಗಿ ಮತ್ತು ಅದಕ್ಕೆ ಸಂಬಂಧಪಟ್ಟ ವಿಷಯಗಳಿಗಾಗಿ ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಷನ್ ಶುಲ್ಕ ನಿಷೇಧ) ಅಧಿನಿಯಮ, 1984 (1984ರ ಕರ್ನಾಟಕ ಅಧಿನಿಯಮ ಸಂಖ್ಯೆ 37) ಇದು ದಿನಾಂಕ: 11.7.1983 ರಿಂದ ಜಾರಿಗೆ ಬಂದಿತು. ಸದರಿ ಅಧಿನಿಯಮದ 2ನೇ ಪ್ರಕರಣದ (ಸಿ) ಖಂಡದಲ್ಲಿ ಶೈಕ್ಷಣಿಕ ಸಂಸ್ಥೆಯನ್ನು, ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಯಲಗಳ ಅಧಿನಿಯಮ, 1976ರ (1976ರ ಕರ್ನಾಟಕ ಅಧಿನಿಯಮ 28) ಅಡಿಯಲ್ಲಿ ಸ್ಥಾಪಿಸಲಾದ ಒಂದು ವಿಶ್ವವಿದ್ಯಾನಿಲಯದಿಂದ ಪ್ರದಾನ ಮಾಡಲಾಗುವ ಪದವಿಗೆ ಅವಕಾಶ ಮಾಡಿಕೊಡುವ ಒಂದು ಸಂಸ್ಥೆ ಎಂಬುದಾಗಿ ಪರಿಭಾಷಿಸಲಾಗಿದೆ. ಸದರಿ ಅಧಿನಿಯಮಿತಿಯ ತರುವಾಯ, ಕನ್ನಡ ವಿಶ್ವವಿದ್ಯಾನಿಲಯ ಅಧಿನಿಯಮ, 1991, ಕರ್ನಾಟಕ ರಾಜ್ಯ ಮುಕ್ತವಿಶ್ವವಿದ್ಯಾನಿಲಯ ಅಧಿನಿಯಮ, 1992, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯ ಅಧಿನಿಯಮ, 1994 ಮತ್ತು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯ ಅಧಿನಿಯಮ, 1994 ಇವುಗಳನ್ನು ಅಧಿನಿಯಮಿತಿಗೊಳಿಸಲಾಯಿತು ಮತ್ತು ಕರ್ನಾಟಕ ಕೃಷಿ ವಿಜ್ಞಾನಗಳ ವಿಶ್ವವಿದ್ಯಾನಿಲಯ ಅಧಿನಿಯಮ, 1963, ಇದು ಶೈಕ್ಷಣಿಕ ಸಂಸ್ಥೆಯ ಪರಿಭಾಷೆಯೊಳಗೆ ಬಂದಿರುವುದಿಲ್ಲ. ಆದ್ದರಿಂದ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ಸ್ಥಾಪಿತವಾದ ವಿಶ್ವವಿದ್ಯಾನಿಲಯಗಳಿಂದ ಪ್ರದಾನ ಮಾಡಲಾಗುವ ಪದವಿಗೆ ಅವಕಾಶ ಮಾಡಿಕೊಡುವ ಎಲ್ಲ ಸಂಸ್ಥೆಗಳನ್ನು ಶೈಕ್ಷಣಿಕ ಸಂಸ್ಥೆಯ ಪರಿಭಾಷೆಯೊಳಗೆ ತರುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

ಆರ್ಥಿಕ ಜ್ಞಾಪನ ಪತ್ರ

ವಿಧೇಯಕವು ಯಾವುದೇ ಆರ್ಥಿಕ ವೆಚ್ಚವನ್ನು ಒಳಗೊಳ್ಳುವುದಿಲ್ಲ.

ಡಾ. ಜಿ. ಪರಮೇಶ್ವರ್
ಉನ್ನತ ಶಿಕ್ಷಣ ಸಚಿವರು

ಟಿ. ರಾಜಣ್ಣ
ಕಾರ್ಯದರ್ಶಿ

ಅನುಬಂಧ

ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಷನ್ ಶುಲ್ಕ ನಿಷೇಧ) ಅಧಿನಿಯಮವು, 1984ರ (1984ರ ಕರ್ನಾಟಕ ಅಧಿನಿಯಮ ಸಂಖ್ಯೆ 37) ಉದ್ಧೃತ ಭಾಗ.

XX XX XX

2. ಪರಿಭಾಷೆಗಳು.– ಈ ಅಧಿನಿಯಮದಲ್ಲಿ, ಅನ್ಯಥಾ ಅಗತ್ಯಪಡಿಸಿದ ಹೊರತು,–

(ಸಿ) "ಶೈಕ್ಷಣಿಕ ಸಂಸ್ಥೆ" ಎಂದರೆ, ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 1976ರ (1976ರ ಕರ್ನಾಟಕ ಅಧಿನಿಯಮ 28) ಅಡಿಯಲ್ಲಿ ಸ್ಥಾಪಿತವಾದ ಒಂದು ವಿಶ್ವವಿದ್ಯಾನಿಲಯದಿಂದ ಮತ್ತು ಸರ್ಕಾರವು, ಅಧಿಸೂಚನೆಯ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ, ಯಾವುದೇ ಇತರ ಶೈಕ್ಷಣಿಕ ಸಂಸ್ಥೆ ಅಥವಾ ಅಂಥ ಸಂಸ್ಥೆಗಳ ವರ್ಗ ಅಥವಾ ವರ್ಗಗಳಿಂದ ಪ್ರದಾನ ಮಾಡಲಾಗುವ ಪದವಿಗೆ ಅವಕಾಶ ಮಾಡಿಕೊಡುವ, ವೈದ್ಯಕೀಯ ಅಥವಾ ಎಂಜಿನಿಯರಿಂಗ್‌ಗಳಲ್ಲಿ ಶಿಕ್ಷಣ ನೀಡುವ ಕಾರ್ಯದಲ್ಲಿ ತೊಡಗಿರುವ, ಸರ್ಕಾರ, ಖಾಸಗಿ ನಿಕಾಯ, ಸ್ಥಳೀಯ ಪ್ರಾಧಿಕಾರ, ನ್ಯಾಸ, ವಿಶ್ವವಿದ್ಯಾನಿಲಯ ಅಥವಾ ಯಾವೊಬ್ಬ ಇತರ ವ್ಯಕ್ತಿಯಿಂದ ನಿರ್ವಹಿಸಲಾಗುತ್ತಿರುವ, ಯಾವುದೇ ಹೆಸರಿನಿಂದ ಕರೆಯಲಾಗುವ ಯಾವುದೇ ಒಂದು ಸಂಸ್ಥೆ.

XX XX XX